# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **1447 (1578)** |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | **19 /12/2025** |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಸಂಘಟಿತ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಅಸಂಘಟಿತ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆಯ ವಿವರ ಈ ಕೆಳಕಂಡಂತೆ ಇರುತ್ತದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರ ಸಂಖ್ಯೆ **27,35,702** ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1** ರಲ್ಲಿ ಒದಗಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯಲ್ಲಿ ಅಸಂಘಟಿತ ಕಾರ್ಮಿಕರ ಸಂಖ್ಯೆಗೆ ಸಂಬಂಧಿಸಿದಂತೆ, ಈವರೆಗೆ ಕಾರ್ಮಿಕ ಇಲಾಖೆಯಿಂದ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ, ಅಸಂಘಟಿತ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ.<br><br>ಆದರೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳು, ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದಿ ಮಂಡಳಿ ಹಾಗೂ ಕೇಂದ್ರ ಸರ್ಕಾರದ ಇ-ಶ್ರಮ್ ಪೋರ್ಟಲ್ ನಲ್ಲಿ ನೋಂದಾಯಿಸುತ್ತಿದ್ದು, ಅಸಂಘಟಿತ ಕಾರ್ಮಿಕರ ವಿವರ ಕೆಳಕಂಡಂತಿದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-2** ರಲ್ಲಿ ಒದಗಿಸಿದೆ. |
| ಆ) | ಅಸಂಘಟಿತ ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ನೀಡುವ ಸೌಲಭ್ಯಗಳು ಯಾವುವು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಅಸಂಘಟಿತ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ನೀಡುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತೆ ಇರುತ್ತದೆ. |

| | | |
|---|---|---|
| | ಅವುಗಳು ಸರಿಯಾದ ಸಮಯದಲ್ಲಿ ದೊರಕುತ್ತಿದಿಯೇ; | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಲ್ಲಿ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ **ಅನುಬಂಧ-3** ರಲ್ಲಿ ಲಗತ್ತಿಸಿರುವ ಯೋಜನೆಗಳನ್ನು ನೀಡಲಾಗುತ್ತಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆಯನ್ನು ಒದಗಿಸಲು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಒದಗಿಸಲಾಗುತ್ತಿರುವ ಸೌಲಭ್ಯಗಳು ಈ ಕೆಳಗಿನಂತಿದೆ:<br><br>1. **<u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ :</u>**<br>ಈ ಯೋಜನೆಯಡಿ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲಕಸುಬಿನ ವೃತ್ತಿ ಆಧಾರಿತ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟಾರೆ **101** ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ, ಈ ಕೆಳಕಂಡ ಸೌಲಭ್ಯಗಳನ್ನೊಳಗೊಂಡಂತೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. ಈವರೆಗೆ ಒಟ್ಟು **25,45,607** ಅಸಂಘಟಿತ ವರ್ಗದ ಕಾರ್ಮಿಕರು ನೋಂದಾಯಿತರಾಗಿರುತ್ತಾರೆ.<br><br>**ಸೌಲಭ್ಯಗಳು:**<br>**ಅ) ಅಪಘಾತ ಪರಿಹಾರ ಸೌಲಭ್ಯ:**<br>ಅಪಘಾತದಿಂದ ಮರಣ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ **ರೂ.1 ಲಕ್ಷ** ಪರಿಹಾರ.<br>ಅಪಘಾತದಿಂದ ಶಾಶ್ವತ/ ಭಾಗಶಃ ದುರ್ಬಲತೆ ಹೊಂದಿದಲ್ಲಿ **ರೂ.1.00** ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).<br>ಆಸ್ಪತ್ರೆ ವೆಚ್ಚ ಮರುಪಾವತಿ **ರೂ.50,000/-**ಗಳವರೆಗೆ. (ಅಪಘಾತ ಪ್ರಕರಣಗಳಲ್ಲಿ ಮಾತ್ರ)<br><br>**ಆ) ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚ:**<br>ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ **ರೂ.10,000**/-ಗಳ ಧನ ಸಹಾಯ.<br><br>2. **<u>ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:</u>**<br>ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಿಗ್ಗಿ, ಜೊಮಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್ ಡೆಲಿವರಿ ಮಾಡುವ ಹಾಗೂ ಮುಂತಾದ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತ ಗಿಗ್ ಕಾರ್ಮಿಕರು ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಾಯಿಸಿಕೊಂಡು ಯೋಜನೆಯ ಸೌಲಭ್ಯವನ್ನು ಪಡೆಯಬಹುದಾಗಿದೆ. **ಈವರೆಗೆ ಒಟ್ಟು 30,256 ಗಿಗ್ ಕಾರ್ಮಿಕರು** ನೋಂದಾಯಿತರಾಗಿರುತ್ತಾರೆ.<br><br>**ಸೌಲಭ್ಯಗಳು:-**<br>• ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ **ರೂ2.00** ಲಕ್ಷ ಹಾಗೂ **ರೂ2.00** ಲಕ್ಷ ಜೀವ ವಿಮಾ ಸೇರಿ ಒಟ್ಟು **ರೂ.4.00** ಲಕ್ಷಗಳು.<br>• ಅಪಘಾದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ **ರೂ.2.00** ಲಕ್ಷಗಳವರೆಗೆ<br>• ಆಸ್ಪತ್ರೆ ವೆಚ್ಚ ಮರುಪಾವತಿ **ರೂ.1.00** ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ) |

3. **<u>ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:</u>**

ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ಹಾಗೂ ಹಾಲು ವಿತರಿಸುವ ಕಾರ್ಮಿಕರು ಅರೆಕಾಲೀನ ವೃತ್ತಿ ನಿರ್ವಹಿಸುತ್ತಿದ್ದು, ಇಂತಹ ಕಾರ್ಮಿಕರಿಗೆ ಸಾಮಾಜಿಕ ಮತ್ತು ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. **ಈವರೆಗೆ ಒಟ್ಟು 11,388 ಕಾರ್ಮಿಕರು** ನೋಂದಾಯಿತರಾಗಿರುತ್ತಾರೆ.

**ಸೌಲಭ್ಯಗಳು:**

- ಅಪಘಾತದಿಂದ ಮರಣ ಹೊಂದಿದಲ್ಲಿ ರೂ2.00 ಲಕ್ಷ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ (ಶೇಕಡವಾರು ದುರ್ಬಲತೆ ಆಧಾರದಮೇಲೆ).
- ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ.

4. **<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ :</u>**

ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ಪರಿಹಾರ ಸೌಲಭ್ಯ ಒದಗಿಸಲಾಗುತ್ತಿದೆ, ಮತ್ತು ಯೋಜನೆಯಡಿ ಅಪಘಾತದಿಂದ ನಿಧನರಾದ ಹಾಗೂ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿ ಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ "ಶೈಕ್ಷಣಿಕ ಸಹಾಯಧನ" ಸೌಲಭ್ಯ ನೀಡಲಾಗುತ್ತಿದೆ.

5. **<u>ಕರ್ನಾಟಕ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ (The Karnataka Motor Transport And Other Allied Workers Social Security and Welfare Board):</u>**

ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ_ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ, ಅವಶ್ಯಕವಿರುವ ಸಂಪನ್ಮೂಲವನ್ನು ಕ್ರೋಢೀಕರಿಸಲು ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕಲ್ಯಾಣ ಸುಂಕ ಅಧಿನಿಯಮ-2024 (Karnataka Motor Transport and Other Allied Workers Social Security and Welfare Cess Bill, 2024) ನ್ನು ರೂಪಿಸಿ ಜಾರಿಗೆ ತಂದಿದ್ದು, ಇದಕ್ಕನುಗುಣವಾಗಿ ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ನಿಯಮಾವಳಿಗಳು, 2024 ಅನ್ನು ರಚಿಸಿರುತ್ತದೆ. ಸದರಿ ಕಾಯ್ದೆಯ ಕಲಂ 3 ರನ್ವಯ ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕ್ಷೇಮಾಭಿವೃದ್ಧಿ ಮಂಡಳಿಯನ್ನು ರಚಿಸಲಾಗಿರುತ್ತದೆ. **ಈವರೆಗೆ ಒಟ್ಟು 10,50,095 ಕಾರ್ಮಿಕರು** ನೋಂದಾಯಿತರಾಗಿರುತ್ತಾರೆ.

**<u>ಈ ಕಾಯ್ದೆಯಡಿ ಸಂಗ್ರಹವಾಗಬಹುದಾದ ಅನುದಾನದಿಂದ ಅರ್ಹ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾಪಿಸಲಾಗಿದೆ.</u>**

**<u>ಅಪಘಾತ ಪರಿಹಾರ:</u>**

- ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷ ಪರಿಹಾರ.

| | | |
|---|---|---|
| | | • ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷದವರೆಗೆ ಪರಿಹಾರ.<br>• ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಗರಿಷ್ಠ ರೂ. 1 ಲಕ್ಷದವರೆಗೆ<br><br>b. **ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯ ಸಂಸ್ಕಾರ ವೆಚ್ಚ:** ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.<br>c. **ಶೈಕ್ಷಣಿಕ ಧನಸಹಾಯ:** ನೋಂದಾಯಿತ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಗರಿಷ್ಠ ಇಬ್ಬರು ಮಕ್ಕಳಿಗೆ:-<br><br>• 12ನೇ ತರಗತಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.3,000/-<br>• ಪದವಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.5,500/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣಕ್ಕಾಗಿ – ವಾರ್ಷಿಕ ತಲಾ ರೂ.8,000/-<br>• ಸ್ನಾತಕೋತ್ತರ ಪದವಿಗಾಗಿ – ವಾರ್ಷಿಕ ತಲಾ ರೂ.11,000/-<br><br>d. **ಅಪಘಾತದಿಂದ ನಿಧನರಾದ/ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಮೋಟಾರು ಸಾರಿಗೆಮತ್ತು ಇತರೆ ಸಂಬಂಧಿತ ಕಾರ್ಮಿಕರ ಗರಿಷ್ಠ ಇಬ್ಬರು ಮಕ್ಕಳಿಗೆ:-**<br><br>• 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ – ವಾರ್ಷಿಕ ತಲಾ ರೂ.10,000/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣಕ್ಕಾಗಿ – ವಾರ್ಷಿಕ ತಲಾ ರೂ.20,000/-<br>• ಸ್ನಾತಕೋತ್ತರ ಪದವಿಗಾಗಿ – ವಾರ್ಷಿಕ ತಲಾ ರೂ.25,000/-<br><br>**ಹೆರಿಗೆ ಸಹಾಯ ಧನ:** ನೋಂದಾಯಿತ ಮಹಿಳಾ ಫಲಾನುಭವಿಯ ಮೊದಲ ಎರಡು ಜೀವಂತ ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳಂತೆ ಹೆರಿಗೆ ಸಹಾಯಧನ.<br><br>ಮೇಲ್ಕಂಡ ಯೋಜನೆಯಡಿ ಫಲಾನುಭವಿಗಳು ಮಂಡಳಿಗೆ ಸಲ್ಲಿಸಿದ ಅರ್ಜಿಗಳನ್ನು ಯೋಜನೆಯ ಮಾರ್ಗಸೂಚಿಯನ್ವಯ ಪರಿಶೀಲಿಸಿ, ಮಾನದಂಡಗಳನ್ನು ಪೂರೈಸಿದ ಎಲ್ಲಾ ಅರ್ಜಿಗಳನ್ನು ನಿಗದಿತ ಕಾಲಮಿತಿಯೊಳಗೆ ವಿಲೇವಾರಿಗೊಳಿಸಲಾಗುತ್ತಿದೆ. |
| ಇ) | ಅಸಂಘಟಿತ ಗಾರ್ಮೆಂಟ್ಸ್ ವಲಯದಲ್ಲಿ ಕಾರ್ಮಿಕರಿಗೆ ಸರ್ಕಾರ ನಿಗಧಿಪಡಿಸಿರುವ ಸೌಲಭ್ಯಗಳು ಯಾವುವು; ಅವುಗಳನ್ನು ಸಂಬಂಧಪಟ್ಟ ಖಾಸಗಿ ಕ್ಷೇತ್ರದ ಮಾಲೀಕರು ನೀಡುತ್ತಿದ್ದಾರೆಯೇ? | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಗಾರ್ಮೆಂಟ್ಸ್ ವಲಯದಲ್ಲಿ ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯವನ್ನು ಹೊಂದಿರದೇ ಕಾರ್ಯನಿರ್ವಹಿಸುತ್ತಿರುವ ಟೈಲರ್ಸ್ ಗಳು ಅಸಂಘಟಿತ ಕಾರ್ಮಿಕರಾಗುತ್ತಿದ್ದು, ಇಂತಹ ಕಾರ್ಮಿಕರು ಮಂಡಳಿಯ ಮೂಲಕ ಜಾರಿಗೊಳಿಸುತ್ತಿರುವ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ನೋಂದಣಿ ಮಾಡಿಕೊಂಡು ಈ ಕೆಳಕಂಡ ಸೌಲಭ್ಯಗಳನ್ನು ಪಡೆಯ ಬಹುದಾಗಿರುತ್ತದೆ.<br><br>**ಅ) ಅಪಘಾತ ಪರಿಹಾರ ಸೌಲಭ್ಯ:**<br>• ಅಪಘಾತದಿಂದ ಮರಣ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ **ರೂ.1 ಲಕ್ಷ** ಪರಿಹಾರ. |

| | | |
|---|---|---|
| | | • ಅಪಘಾತದಿಂದ ಶಾಶ್ವತ/ ಭಾಗಶಃ ದುರ್ಬಲತೆ ಹೊಂದಿದಲ್ಲಿ **ರೂ.1.00** ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).<br>• ಆಸ್ಪತ್ರೆ ವೆಚ್ಚ ಮರುಪಾವತಿ **ರೂ.50,000/-**ಗಳವರೆಗೆ. (ಅಪಘಾತ ಪ್ರಕರಣಗಳಲ್ಲಿ ಮಾತ್ರ)<br><br>**ಆ) ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚ:** ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ **ರೂ.10,000**/-ಗಳ ಧನ ಸಹಾಯ.<br><br>ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯಕ್ಕೆ ಒಳಪಟ್ಟು ಗಾರ್ಮೆಂಟ್ಸ್ ವಲಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರು ಸಂಘಟಿತ ಕಾರ್ಮಿಕರಾಗುತ್ತಿದ್ದು, ಇವರು ಕನಿಷ್ಠ ವೇತನ ಕಾಯ್ದೆ, ಮಾತೃತ್ವ ಸೌಲಭ್ಯ, ಉಪಧನ ಕಾಯ್ದೆ ಗಳಡಿ ಇರುವ ಎಲ್ಲಾ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ. |

**ಕಾಇ 505 ಎಲ್ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-1

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1578 (1447)

| ಜಿಲ್ಲಾವಾರು ನೋಂದಾಯಿತ ಕಟ್ಟಡ ಕಾರ್ಮಿಕರ ಮಾಹಿತಿ | | |
|---|---|---|
| ಕ್ರ.ಸಂ. | ಜಿಲ್ಲೆಯ ಹೆಸರು | ಒಟ್ಟು ಕಾರ್ಮಿಕರ ಸಂಖ್ಯೆ |
| 1 | ಬಾಗಲಕೋಟೆ | 112553 |
| 2 | ಬೆಂಗಳೂರುಗ್ರಾಮಾಂತರ | 21462 |
| 3 | ಬೆಂಗಳೂರುನಗರ | 337089 |
| 4 | ಬೆಳಗಾವಿ | 162109 |
| 5 | ಬಳ್ಳಾರಿ | 34861 |
| 6 | ಬೀಧರ್ | 131388 |
| 7 | ವಿಜಯಾಪುರ | 90268 |
| 8 | ಚಾಮರಾಜನಗರ | 36023 |
| 9 | ಚಿಕ್ಕಬಳ್ಳಾಪುರ | 41547 |
| 10 | ಚಿಕ್ಕಮಗಳೂರು | 67294 |
| 11 | ಚಿತ್ರದುರ್ಗ | 88462 |
| 12 | ದಕ್ಷಿಣಕನ್ನಡ | 62742 |
| 13 | ದಾವಣಗೆರೆ | 122015 |
| 14 | ಧಾರವಾಡ | 125158 |
| 15 | ಗದಗ | 73256 |
| 16 | ಕಲಬುರ್ಗಿ | 146175 |
| 17 | ಹಾಸನ | 64421 |
| 18 | ಹಾವೇರಿ | 88468 |
| 19 | ಕೊಡಗು | 6553 |
| 20 | ಕೋಲಾರ | 82232 |
| 21 | ಕೊಪ್ಪಳ | 151792 |
| 22 | ಮಂಡ್ಯ | 30399 |
| 23 | ಮೈಸೂರು | 119263 |
| 24 | ರಾಯಚೂರು | 65036 |
| 25 | ರಾಮನಗರ | 37586 |

| | | |
|---|---|---|
| 26 | ಶಿವಮೊಗ್ಗ | 62465 |
| 27 | ತುಮಕೂರು | 89300 |
| 28 | ಉಡುಪಿ | 40854 |
| 29 | ಉತ್ತರಕನ್ನಡ | 119812 |
| 30 | ವಿಜಯನಗರ | 45470 |
| 31 | ಯಾದಗಿರಿ | 79649 |
| | **ಒಟ್ಟು** | **27,35,702** |

# ಅನುಬಂಧ-2

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1578 (1447)

**ಕರ್ನಾಟಕರಾಜ್ಯಅಸಂಘಟಿತಕಾರ್ಮಿಕರಸಾಮಾಜಿಕಭದ್ರತಾಮಂಡಳಿಯುಜಾರಿಗೊಳಿಸುತ್ತಿರುವವಿವಿಧ ಯೋಜನೆಗಳಡಿನೋಂದಾಯಿತ ಕಾರ್ಮಿಕರ ವಿವರ:**

| Sl. No | ಜಿಲ್ಲೆ | Ambedkar Karmika Sahaya Hasta scheme | Transport Workers Scheme | Gig Workers Scheme | Newspapper & Milk delevery | E-shram |
|---|---|---|---|---|---|---|
| 1 | ಬಾಗಲಕೋಟೆ | 101270 | 20573 | 650 | 397 | 431091 |
| 2 | ಬಳ್ಳಾರಿ | 140913 | 23146 | 1259 | 294 | 487840 |
| 3 | ಬೆಳಗಾವಿ | 273154 | 58362 | 1928 | 802 | 1013509 |
| 4 | ಬೆಂಗಳೂರು | 68780 | 44854 | 1056 | 334 | 184656 |
| 5 | ಬೆಂಗಳೂರು | 249202 | 184870 | 9759 | 2780 | 560904 |
| 6 | ಬೀದರ್ | 59493 | 30257 | 393 | 134 | 410196 |
| 7 | ಚಾಮರಾಜನಗರ | 55812 | 50030 | 285 | 262 | 243548 |
| 8 | ಚಿಕ್ಕಬಳ್ಳಾಪುರ | 59629 | 22002 | 454 | 173 | 235095 |
| 9 | ಚಿಕ್ಕಮಗಳೂರು | 31211 | 26519 | 272 | 137 | 205520 |
| 10 | ಚಿತ್ರದುರ್ಗ | 65644 | 30109 | 450 | 280 | 323544 |
| 11 | ದಕ್ಷಿಣಕನ್ನಡ | 78546 | 35896 | 916 | 180 | 254358 |
| 12 | ದಾವಣಗೆರೆ | 89493 | 17800 | 927 | 425 | 339523 |
| 13 | ಧಾರವಾಡ | 112295 | 37756 | 1619 | 543 | 388699 |
| 14 | ಗದಗ | 53635 | 23641 | 550 | 271 | 207356 |
| 15 | ಹಾಸನ | 45262 | 37820 | 438 | 250 | 301371 |
| 16 | ಹಾವೇರಿ | 81733 | 20517 | 462 | 244 | 386640 |
| 17 | ಕಲಬುರ್ಗಿ | 91024 | 32996 | 801 | 335 | 642625 |
| 18 | ಕೊಡಗು | 10072 | 14497 | 171 | 62 | 69036 |
| 19 | ಕೋಲಾರ | 59856 | 34310 | 565 | 351 | 261073 |
| 20 | ಕೊಪ್ಪಳ | 41343 | 18786 | 128 | 137 | 280554 |
| 21 | ಮಂಡ್ಯ | 73419 | 28969 | 532 | 274 | 327946 |
| 22 | ಮೈಸೂರು | 149011 | 46553 | 1424 | 566 | 514837 |
| 23 | ರಾಯಚೂರು | 58240 | 20882 | 663 | 232 | 433264 |
| 24 | ರಾಮನಗರ | 42684 | 18001 | 407 | 178 | 189963 |
| 25 | ಶಿವಮೊಗ್ಗ | 68895 | 31990 | 931 | 419 | 363314 |
| 26 | ತುಮಕೂರು | 117313 | 32960 | 809 | 359 | 424719 |
| 27 | ಉಡುಪಿ | 57045 | 39397 | 526 | 197 | 203871 |
| 28 | ಉತ್ತರಕನ್ನಡ | 97694 | 12297 | 678 | 220 | 312591 |
| 29 | ವಿಜಯನಗರ | 5668 | 14887 | 257 | 97 | 114745 |
| 30 | ವಿಜಯಪುರ | 69534 | 32565 | 796 | 376 | 594660 |
| 31 | ಯಾದಗಿರಿ | 37737 | 6853 | 150 | 79 | 277433 |
| | ಒಟ್ಟು | 25,45,607 | 10,50,095 | 30,256 | 11,388 | 1,09,84,481 |

# ಅನುಬಂಧ-3

## ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1578 (1447)

**ಮಂಡಳಿಯ ವತಿಯಿಂದ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್ – ಕಮ್ - ಟೂಲ್ ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
7. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
8. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
9. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
10. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/**- ಸಹಾಯಧನ.

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| **1** | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| **2** | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| **3** | 9 ಮತ್ತು 10ನೇ ತರಗತಿ | **3,000/-** | - |
| **4** | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| **5** | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| **6** | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| **7** | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವುಗಳು | **15,000/-** | **20,000/-** |
| **8** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | **20,000/-** | **25,000/-** |
| **9** | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **10** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಂಫಿಲ್ (03 ವರ್ಷ ಅವಧಿಯವರೆಗೆ) | **40,000/-** | **-** |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

11. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
12. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
14. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
15. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.